## ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 02 ಇಎಸ್‌ಟಿ (9) 2015 /1900

ನಿರ್ದೇಶಕರವರ ಕಚೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560001.
ದಿನಾಂಕ: 15-09-2015.

## ಸುತ್ತೋಲೆ

ವಿಷಯ: ಸಮೂಹ 'ಡಿ' ದರ್ಜೆ ಸರ್ಕಾರಿ ನೌಕರರು ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಯನ್ನು ನಿಯಮಿಸಲಾದ ಪ್ರಾಧಿಕಾರಕ್ಕೆ ಸಲ್ಲಿಸುವ ಬಗ್ಗೆ

ಉಲ್ಲೇಖ: 1. ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ:ಸಿಆಸುಇ/90/ಸೇನಿನಿ/2014 ದಿ:01.08.2015
2. ಈ ಕಛೇರಿ ಹಿಂಬರಹ ಸಂಖ್ಯೆ:ಡಿಟಿಇ/02/ಇಎಸ್‌ಟಿ/09/2015 ದಿ:12.08.2015

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಹಾಗೂ ಉಲ್ಲೇಖ(1) ರನ್ವಯ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 23(1) ಡಿ ಟಿಪ್ಪಣಿ 1 ರಲ್ಲಿ ಸಮೂಹ –'ಡಿ' ದರ್ಜೆ ಸರ್ಕಾರಿ ನೌಕರರಿಗೆ ಆಸ್ತಿ ಮತ್ತು ಹೊಣೆಗಾರಿಕೆ ವಿವರ ಪಟ್ಟಿಯನ್ನು (2014-15 ನೇ ಸಾಲಿನ) ಒಂದು ತಿಂಗಳೊಳಗೆ ನಿಯಮಿಸಲಾದ ಪ್ರಾಧಿಕಾರಕ್ಕೆ ನಿಗದಿತ ನಮೂನೆಯಲ್ಲಿ ಸಲ್ಲಿಸಲು ಉಲ್ಲೇಖ(2) ರಲ್ಲಿ ತಿಳಿಸಿರುವಂತೆ ಸೂಚಿಸಲಾಗಿತ್ತು. ಆದರೆ ಇದುವರೆವಿಗೂ ಯಾವುದೇ ಸಮೂಹ-'ಡಿ' ದರ್ಜೆ ಸರ್ಕಾರಿ ನೌಕರರು ತಮ್ಮ ಮತ್ತು ತಮ್ಮ ಕುಟುಂಬದ ಸದಸ್ಯರ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಗಳನ್ನು ಸಲ್ಲಿಸದೇ ಇರುವುದರಿಂದ ಈ ಸುತ್ತೋಲೆ ತಲುಪಿದ ಕೂಡಲೇ ಎಲ್ಲಾ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು ಸ್ಟೆರಿಕ್ ಸಂಸ್ಥೆ, ಬೆಂಗಳೂರು ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್. ಚಿತ್ರಕಲಾಕಲಾ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳು, ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಮೂಹ-'ಡಿ' ದರ್ಜೆ ಸರ್ಕಾರಿ ನೌಕರರ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಗಳನ್ನು ನಿಗದಿತ ನಮೂನೆಗಳಲ್ಲಿ ಪಡೆದುಕೊಂಡು ಕಳುಹಿಸಿಕೊಡಲು ತಿಳಿಸಲಾಗಿದೆ.

ಆಡಳಿತಾಧಿಕಾರಿ.

**ಪ್ರತಿ ಇವರಿಗೆ:**

1. ಪ್ರಾಚಾರ್ಯರು ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು,
2. ಪ್ರಾಚಾರ್ಯರು ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್,
3. ಪ್ರಾಚಾರ್ಯರು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು,
4. ಪ್ರಾಚಾರ್ಯರು ಸ್ಟೆರಿಕ್ ಸಂಸ್ಥೆ, ಬೆಂಗಳೂರು,
5. ಪ್ರಾಚಾರ್ಯರು ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್
6. ಪ್ರಾಚಾರ್ಯರು ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ
7. ನಿರ್ದೇಶನಾಲಯದ ಎಲ್ಲಾ ಸಮೂಹ – 'ಡಿ' ದರ್ಜೆ ಸಿಬ್ಬಂದಿಯವರಿಗೆ ಸಂಬಂಧಿಸಿದ ಅಧಿಕಾರಿಗಳ ಮುಖಾಂತರ ಸಲ್ಲಿಸುವುದು.
8. ಜಂಟಿ ನಿರ್ದೇಶಕರುಗಳಿಗೆ/ಆಡಳಿತಾಧಿಕಾರಿ/ಸಹಾಯಕ ಆಡಳಿತಾಧಿಕಾರಿ/ರಿಜಿಸ್ಟ್ರಾರ್‌ಇವರಿಗೆ ಮಾಹಿತಿಗಾಗಿ
9. ನಿರ್ದೇಶಕರ ಆಪ್ತ ಶಾಖೆಗೆ
10. ಇ- ಆಡಳಿತ ವಿಭಾಗಕ್ಕೆ

Sh est(9)

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 90 ಸೇನಿಸಿ 2014

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ: 01/08/2015

## ಸುತ್ತೋಲೆ

ವಿಷಯ : "ಸಮೂಹ-'ಡಿ' ದರ್ಜೆ ಸರ್ಕಾರಿ ನೌಕರರು ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರಪಟ್ಟಿಕೆಯನ್ನು ನಿಯಮಿಸಲಾದ ಪ್ರಾಧಿಕಾರಕ್ಕೆ ಸಲ್ಲಿಸುವ ಬಗ್ಗೆ.

*****

ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 23(1) ರನ್ವಯ "ಪ್ರತಿಯೊಬ್ಬ ಸರ್ಕಾರಿ ನೌಕರನು ಯಾವುದೇ ಸೇವೆಗೆ ಅಥವಾ ಹುದ್ದೆಗೆ ಅವನ ಮೊದಲ ನೇಮಕ ಆದಾಗ ಮತ್ತು ಆ ತರುವಾಯ ಮಾರ್ಚ್ 31ಕ್ಕೆ ಅಂತ್ಯಗೊಳ್ಳುವ ಪ್ರತಿ ಹನ್ನೆರಡು ತಿಂಗಳ ಅಂತರದಲ್ಲಿ ತನ್ನ ಮತ್ತು ತನ್ನ ಕುಟುಂಬದ ಎಲ್ಲ ಸದಸ್ಯರ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಿವರಪಟ್ಟಿಕೆಯನ್ನು ಸರ್ಕಾರವು ನಿಯಮಿಸಬಹುದಾದಂಥ ನಮೂನೆಯಲ್ಲಿ ಸಲ್ಲಿಸತಕ್ಕದ್ದಾಗಿರುತ್ತದೆ.

ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 23(1)(ಡಿ) ಟಿಪ್ಪಣಿ-Iರಲ್ಲಿ 23(1)ನೇ ಉಪನಿಯಮವು 'ಡಿ' ಸಮೂಹದ ನೌಕರರಿಗೆ ಸಾಮಾನ್ಯವಾಗಿ ಅನ್ವಯವಾಗತಕ್ಕದ್ದಲ್ಲ ಎಂದಿರುತ್ತದೆ. ಆದರೆ, ಸರ್ಕಾರವು ಅದು ಅಂಥ ಯಾವುದೇ ಸರ್ಕಾರಿ ನೌಕರನಿಗೆ ಅಥವಾ ಸರ್ಕಾರಿ ನೌಕರರ ವರ್ಗಕ್ಕೆ ಅನ್ವಯವಾಗತಕ್ಕದ್ದೆಂದು ನಿರ್ದೇಶಿಸಬಹುದಾಗಿರುತ್ತದೆ.

ಸಮೂಹ 'ಡಿ' ದರ್ಜೆ ನೌಕರರು ಆಸ್ತಿ ಮತ್ತು ಹೊಣೆಗಾರಿಕೆ ವಿವರಪಟ್ಟಿಕೆಯನ್ನು ನಿಯಮಿಸಲಾದ ಪ್ರಾಧಿಕಾರಕ್ಕೆ ಸಲ್ಲಿಸುವಂತಿಲ್ಲವಾದ್ದರಿಂದ, ಅವರ ಆಸ್ತಿ ಮತ್ತು ಹೊಣೆಗಾರಿಕೆ ಪರಿಶೀಲನೆಗೆ ಒಳಪಡದಂತಾಗಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 23(1)(ಡಿ) ಟಿಪ್ಪಣಿ-Iರಲ್ಲಿ ಸಮೂಹ-'ಡಿ' ದರ್ಜೆ ಸರ್ಕಾರಿ ನೌಕರರಿಗೆ ಆಸ್ತಿ ಮತ್ತು ಹೊಣೆಗಾರಿಕೆ ವಿವರಪಟ್ಟಿಕೆಯನ್ನು ಸಲ್ಲಿಸಲು ನೀಡಿದ್ದ ವಿನಾಯಿತಿಯನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿದೆ.

ಪು.ತಿ.ನೋ...2

ಇನ್ನುಮುಂದೆ ಸಮೂಹ-'ಡಿ' ದರ್ಜೆ ನೌಕರರು ಸಹ ಆಸ್ತಿ ದಾಯಿತ್ವದ ವಿವರಪಟ್ಟಿಕೆಯನ್ನು ನಿಯಮಿಸಲಾದ ಪ್ರಾಧಿಕಾರಕ್ಕೆ ನಿಗದಿತ ನಮೂನೆಯಲ್ಲಿ ತಪ್ಪದೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ. ಮತ್ತು 2014-15ನೇ ಸಾಲಿನ ಆಸ್ತಿ ದಾಯಿತ್ವದ ವಿವರಪಟ್ಟಿಕೆಯನ್ನು ಒಂದು ತಿಂಗಳೊಳಗಾಗಿ ಸಲ್ಲಿಸಲು ಸೂಚಿಸಲಾಗಿದೆ.

(ಡಾ|| ಇ.ವಿ. ರಮಣ ರೆಡ್ಡಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 01/08/2015ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 500 ಪ್ರತಿಗಳನ್ನು ಒದಗಿಸಲು.

**ಇವರಿಗೆ:**

1. *ಪ್ರಧಾನ ಮಹಾಲೇಖಪಾಲರು, (ಜಿ &ಎಸ್‌ಎಸ್‌ಎ), (ಇ &ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13. *ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
15. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
16. ಎಲ್ಲಾ ಆರಕ್ಷಕ ಮಹಾ ನಿರೀಕ್ಷಕರು ಮತ್ತು ಉಪ ಆರಕ್ಷಕ ಮಹಾ ನಿರೀಕ್ಷಕರು
17. ಎಲ್ಲಾ ಇಲಾಖಾ ಮುಖ್ಯಸ್ಥರು
18. ಎಲ್ಲಾ ಪ್ರಾದೇಶಿಕ ಆಯುಕ್ತರು / ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ / ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು
19. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
21. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು

(* ಮುಖ ಪತ್ರದೊಂದಿಗೆ)